ನಿ-330-(25)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪೂರ ಮತ್ತು ಶ್ರೀ ಪುಟ್ಟಣ್ಣ ಇವರುಗಳು ನಿಯಮ 330 ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ವಿಷಯ**

1995ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಪ್ರಸ್ತಾಪಿಸುವುದು.

**ಉತ್ತರ**

ಸರ್ಕಾರದ ಆದೇಶ ಸಂಖ್ಯೆ: ಇಡಿ 59 ಪಿಎಂಸಿ 2006, ದಿನಾಂಕ:06.10.2007ರಲ್ಲಿ ದಿನಾಂಕ:01.06.1987 ರಿಂದ 1992-93ನೇ ಶೈಕ್ಷಣಿಕ ಸಾಲಿನ ಅವಧಿಯಲ್ಲಿ ಯಾವುದೇ ವಿಚ್ಛಿನ್ನತೆ ಇಲ್ಲದೆ ನಡೆಸಲಾಗುತ್ತಿರುವ ಖಾಸಗಿ ಪ್ರಾಥಮಿಕ ಶಾಲೆಗಳು, ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲಾಗಿದೆ ಹಾಗೂ ಸರ್ಕಾರದ ಆದೇಶ ಸಂಖ್ಯೆ:ಇಡಿ 217 ಪಿಎಂಸಿ 2008, ದಿನಾಂಕ:08.09.2008ರಲ್ಲಿ 1993-94 ಮತ್ತು 1994-95ನೇ ಶೈಕ್ಷಣಿಕ ಸಾಲುಗಳ ಅವಧಿಯಲ್ಲಿ ಪ್ರಾರಂಭಿಸಿ ವಿಚ್ಛಿನ್ನತೆ ಇಲ್ಲದೆ ನಡೆಸಲಾಗುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಹಾಗೂ ಪದವಿ ಪೂರ್ವ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲಾಗಿದೆ.

1987 ರಿಂದ 1994-95ನೇ ಸಾಲಿನಲ್ಲಿ ಸರ್ಕಾರದಿಂದ ಅನುಮೋದನೆ ಪಡೆದು, ಶಾಶ್ವತ ಅನುದಾನರಹಿತವಾಗಿ ನಡೆಸುತ್ತಿದ್ದ ಇನ್ನು ಬಾಕಿ ಉಳಿದ ಶಾಲಾ-ಕಾಲೇಜುಗಳನ್ನು, ಅನುದಾನಕ್ಕೆ ಒಳಪಡಿಸಿ ಆದೇಶವಾದ 10-12 ವರ್ಷಗಳು ಕಳೆದರೂ ಸಹ, ಆಡಳಿತ ಮಂಡಳಿಯವರು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿರುವುದನ್ನು ಮನಗಂಡು, ಅಂದಿನ ಮಾನ್ಯ ಮುಖ್ಯಮಂತ್ರಿಯವರು ತಮ್ಮ ಅಧ್ಯಕ್ಷತೆಯಲ್ಲಿ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳ ಸಮ್ಮುಖದಲ್ಲಿ ದಿನಾಂಕ:28.09.2018 ರಂದು ಒಂದು ಸಭೆಯನ್ನು ನಡೆಸಿ, ಈ ಕೆಳಕಂಡಂತೆ ನಿರ್ಣಯ ಕೈಗೊಳ್ಳಲಾಗಿದೆ.

> "1987 ರಿಂದ 1994-95ನೇ ಸಾಲಿನ ಅವಧಿಯಲ್ಲಿ ಪ್ರಾರಂಭಗೊಂಡು ಅವಿಚ್ಛಿನ್ನವಾಗಿ ನಡೆಯುತ್ತಿದ್ದು, ವೇತನಾನುದಾನವನ್ನು ಕೋರಿ, ಪ್ರಸ್ತುತ ಸರ್ಕಾರದ ಹಂತದಲ್ಲಿ ಬಾಕಿ ಇರುವ 116-ಪ್ರಾಥಮಿಕ ಶಾಲೆ, 32-ಪ್ರೌಢಶಾಲೆಗಳನ್ನು ಮತ್ತು 29-ಪದವಿ ಪೂರ್ವ ಕಾಲೇಜುಗಳು ಸೇರಿದಂತೆ ಒಟ್ಟು 177 ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಹಾಗೂ ಈಗಾಗಲೇ ಅನುದಾನಕ್ಕೆ ಒಳಪಡಿಸಿರುವ ಪದವಿ ಪೂರ್ವ ಶಿಕ್ಷಣ ಕಾಲೇಜುಗಳಲ್ಲಿ 120 ವಿದ್ಯಾರ್ಥಿಗಳ ಸಂಖ್ಯಾಬಲ ಇರುವ 178 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಶಿಕ್ಷಣ ಇಲಾಖೆಯು ಆರ್ಥಿಕ ಇಲಾಖೆಗೆ ಸಲ್ಲಿಸಿರುವ ಪ್ರಸ್ತಾವನೆಗಳನ್ನು ಅನುಮೋದಿಸಿ ವೇತನಾನುದಾನಕ್ಕೆ ಒಳಪಡಿಸಲು ಮತ್ತು ಮೇಲ್ಕಂಡ ಸಾಲಿನ ಅವಧಿಯಲ್ಲಿ ಪ್ರಾರಂಭಗೊಂಡಿರುವ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು 2007ರಲ್ಲಿ ಅವಕಾಶ ಕಲ್ಪಿಸಿ

ಈಗಾಗಲೇ 11 ವರ್ಷಗಳು ಗತಿಸಿದ್ದರೂ ಸಹ, ಈವರೆವಿಗೆ ಉಳಿದ ಶಾಲೆಗಳ ಪ್ರಸ್ತಾವನೆಗಳು ಬಾರದೇ ಇದ್ದು, ಅವುಗಳನ್ನು ಇನ್ನು ಮುಂದೆ ಪರಿಗಣಿಸಲಾಗುವುದಿಲ್ಲವೆಂದು ಸಭೆಯು ತೀರ್ಮಾನಿಸಿತು"

ಸದರಿ ಸಭೆಯ ತೀರ್ಮಾನದಂತೆ ಸರ್ಕಾರದ ಪತ್ರ ಸಂಖ್ಯೆ: ಇಡಿ 18 ಎಸ್‌ಇಪಿ 2018, ದಿನಾಂಕ:26.10.2018ರಲ್ಲಿ ಮತ್ತು ಸರ್ಕಾರದ ಪತ್ರ ಸಂಖ್ಯೆ:ಇಡಿ 445 ಪಿಬಿಎಸ್ 2018, ದಿನಾಂಕ:29-06-2020ರಲ್ಲಿ ದಿನಾಂಕ:01-06-1987 ರಿಂದ 1994-1995ನೇ ಸಾಲಿನಲ್ಲಿ ಅವಧಿಯಲ್ಲಿ ಪ್ರಾರಂಭವಾಗಿ ವೇತನಾನುದಾನಕ್ಕೆ ಒಳಪಡಿಸಲು ಸಲ್ಲಿಕೆಯಾಗಿರುವ/ಸಲ್ಲಿಕೆಯಾಗುವ ಯಾವುದೇ ಶಾಲಾ-ಕಾಲೇಜುಗಳ ಪ್ರಸ್ತಾವನೆಗಳನ್ನು ಕಡ್ಡಾಯವಾಗಿ ಯಾವುದೇ ಕಾರಣಕ್ಕೂ ಪರಿಗಣಿಸಬಾರದೆಂದು ಎಲ್ಲಾ ಆಯುಕ್ತಾಲಯಗಳಿಗೆ ಸೂಚಿಸಲಾಗಿರುತ್ತದೆ.

ಆರ್ಥಿಕ ಇಲಾಖೆಯ ದಿನಾಂಕ:10-06-2020ರ ಸುತ್ತೋಲೆಯಲ್ಲಿ ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಕಾರಣ 2020-21ನೇ ಸಾಲಿನಲ್ಲಿ ಯಾವುದೇ ಹೊಸ ಅನುದಾನ ರಹಿತ ವಿದ್ಯಾ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲವೆಂದು ತಿಳಿಸಿದ್ದರ ಮೇರೆಗೆ, 1995-2000 ಹಾಗೂ 2001-2005ರವರೆಗೆ ಶಾಶ್ವತ ಅನುದಾನರಹಿತವಾಗಿ ಪ್ರಾರಂಭವಾಗಿರುವ ಯಾವುದೇ ಶಾಲಾ ಕಾಲೇಜುಗಳನ್ನು ವೇತನಾನುಧಾನಕ್ಕೆ ಒಳಪಡಿಸುವ ಕುರಿತಾದ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿ ಇರುವುದಿಲ್ಲ.

ಈತನ್ಮಧ್ಯೆ, 1995-2000 ಹಾಗೂ 2001-2005ರವರೆಗೆ ಶಾಶ್ವತ ಅನುದಾನರಹಿತವಾಗಿ ಪ್ರಾರಂಭವಾಗಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಈ ಹಿಂದಿನ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಸಭೆಯನ್ನು ಏರ್ಪಡಿಸಿ. ಸದರಿ ಸಭೆಯಲ್ಲಿ 1995-2000 ಹಾಗೂ 2001-2005ರವರೆಗೆ ಶಾಶ್ವತ ಅನುದಾನರಹಿತವಾಗಿ ಪ್ರಾರಂಭವಾಗಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಪ್ರತಿ 5 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳು ಎಷ್ಟು ಮತ್ತು ಸದರಿ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು/ಉಪನ್ಯಾಸಕರುಗಳು/ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ವಿವರ ನೀಡುವಂತೆ ಮೂರು ಆಯುಕ್ತಾಲಯಗಳಿಗೆ ಸೂಚಿಸಲಾಗಿದೆ. 1995-2000 ಮತ್ತು 2001-2005ರ ಬ್ಲಾಕ್ ಅವಧಿಯ ಮಾಹಿತಿಯನ್ನು ಮೂರೂ ಆಯುಕ್ತಾಲಯಗಳ ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ.

**ಇಪಿ 267 ಪಿಎಂಸಿ 2021**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು.